**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ಶಿಡ್ಲಘಟ್ಟ**

ಸಿಸಿ.811/2017

| | | | |
|---|---|---|---|
| ಸಾಕ್ಷಿದಾರರ ಹೆಸರು | ಃ | ಜಿ ಎನ್ ಸುಬ್ರಹ್ಮಣ್ಯ | ಸಿಡಬ್ಲೂಃ **05** |
| ತಂದೆ/ಗಂಡನ ಹೆಸರು | ಃ | ಲೇಟ್ ನಾರಾಯಣಸ್ವಾಮಿ | ಪಿಡಬ್ಲೂಃ **05** |
| ವಯಸ್ಸು | ಃ | 43 ವರ್ಷ | ಪ್ರಮಾಣೀಕರಿಸಲಾದ ದಿನಾಂಕ |
| ವೃತ್ತಿ | ಃ | ಗೃಹ ರಕ್ಷಕ | 17.07.2026 |
| ವಾಸ ಸ್ಥಳ | ಃ | ಶಿಡ್ಲಘಟ್ಟ ನಗರ | |

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.
ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ

ಸಾಕ್ಷಿಗೆ ಈಗಾಗಲೇ ಗುರುತಿಸಿರುವ ನಿ.ಪಿ.4 ಸ್ಥಳ ಪಂಚನಾಮೆಯನ್ನು ತೋರಿಸಲಾಗಿ, ಅದಲ್ಲಿರುವ ತಮ್ಮ ಸಹಿಯನ್ನು ಗುರುತಿಸಿದ ಮೇರೆಗೆ ಸಹಿಯನ್ನು ನಿ.ಪಿ.4(ಬಿ) ಎಂದು ಗುರುತಿಸಲಾಯಿತು. ನಿ.ಪಿ.4 ಕ್ಕೆ ಪೋಲೀಸರ ಕೋರಿಗೆ ಮೇರೆಗೆ ಪೋಲಿಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿ.ಪಿ.4 ರಲ್ಲಿ ಬರೆದಿರುವ ಸಂಗತಿಗಳು ನನಗೆ ಗೊತ್ತಿಲ್ಲ.

(ಸಾಕ್ಷಿಯು ಅಭಿಯೋಜನೆ ಪ್ರಕರಣಕ್ಕೆ ವ್ಯತಿರಿಕ್ತ ಸಾಕ್ಷ್ಯ ನುಡಿದಿದ್ದರಿಂದ, ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದಃ

ದಿಃ **08.04.2017** ರಂದು ಸಂಜೆ **04.30** ರಿಂದ **05.15** ರ ಸಮಯದಲ್ಲಿ ಪೋಲೀಸರು ತಾತಹಳ್ಳಿ ಗ್ರಾಮದ ವೇಣುಗೋಪಾಲಸ್ವಾಮಿ ದೇವಸ್ಥಾನದ ಬಳಿಯ ಅಶ್ವಥಕಟ್ಟೆಯ ಬಳಿಯ ಸ್ಥಳದಲ್ಲಿ ಪಂಚನಾಮೆ ಮಾಡಿದ ಕಾಲಕ್ಕೆ ನಾನು ಹಾಜರಿದ್ದು, ನಾನು, ಚಾಸಾ-**6** ಮತ್ತು **7** ರವರು ನಿ.ಪಿ.4 ಕ್ಕೆ ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ನಾನು ನಿ.ಪಿ.4 ರ ಕಾಲಕ್ಕೆ ಸ್ಥಳದಲ್ಲಿ ಹಾಜರಿದ್ದು ಸಹಿ ಮಾಡಿದ್ದರೂ ಸಹ ಆರೋಪಿಗಳೊಂದಿಗೆ ರಾಜಿ ಮಾಡಿಕೊಂಡು ಪೋಲಿಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಆರೋಪಿ ಪರ ವಕೀಲರಿಂದಃ ಪಾಟಿ ಸವಾಲು ಇಲ್ಲ ಎನ್ನುತ್ತಾರೆ.

(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ. ಹೇ. ಕೇ. ಸರಿ ಇದೆ.**

ಸಹಿ/-

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ. ಶಿಡ್ಲಘಟ್ಟ.